All India Radio: Bangalore
National Bulletin In Kannada
17.06.2026  7.35 am
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

<>><><*><><<>

ಮುಖ್ಯಾಂಶಗಳು

೧. ಮಾನವೀಯತೆಗೆ ಭಾರತದ ಮೊದಲ ಆದ್ಯತೆ - ಪ್ರಧಾನಿ ನರೇಂದ್ರ ಮೋದಿ

೨. ಜಿ-೭ ಶೃಂಗಸಭೆ: ವಿಶ್ವ ನಾಯಕರೊಂದಿಗೆ ಪ್ರಧಾನಿ ದ್ವಿಪಕ್ಷೀಯ ಮಾತುಕತೆ

೩. ಯುಮುನಾ ನದಿ ಪುನರುಜ್ಜೀವನ; ಕಿಶೌ ಅಣೆಕಟ್ಟು ಯೋಜನೆಗೆ ಆರು ರಾಜ್ಯಗಳು ಒಪ್ಪಿಗೆ

೪. ಫಿಫಾ ವಿಶ್ವಕಪ್ ಪುಟ್ಬಾಲ್; 'ಐ' ಗುಂಪಿನ ಪಂದ್ಯದಲ್ಲಿ ಸೆನೆಗಲ್ ವಿರುದ್ಧ ಫ್ರಾನ್ಸ್‌ಗೆ ಜಯ

<>><><*><><<>

ಫ್ರಾನ್ಸ್‌ನ ಎವಿಯನ್‌ನಲ್ಲಿ ನಿನ್ನೆ ನಡೆದ ಜಿ-೭ ಶೃಂಗಸಭೆಯಲ್ಲಿ "ನೂತನ ಪಾಲುದಾರಿಕೆಗಳನ್ನು ರೂಪಿಸುವುದು ಮತ್ತು ಅಂತಾರಾಷ್ಟ್ರೀಯ ಒಗ್ಗಟ್ಟಿನ ಪುನರ್‌ನಿರ್ಮಾಣ" ಎಂಬ ವಿಷಯದ ಕುರಿತು ಔಟ್ರೀಚ್ ಅಧಿವೇಶನವನ್ನು ಉದ್ದೇಶಿಸಿ ಪ್ರಧಾನಿ ನರೇಂದ್ರ ಮೋದಿ ಮಾತನಾಡಿದರು. ಪರಸ್ಪರ ಸಂಪರ್ಕ ಹೊಂದಿರುವ ಜಗತ್ತಿನಲ್ಲಿ ಅಂತಾರಾಷ್ಟ್ರೀಯ ಪಾಲುದಾರಿಕೆಗಳನ್ನು ನಿರ್ಮಿಸುವಲ್ಲಿ 'ವಿಶ್ವಾಸ'ದ ಮಹತ್ವವನ್ನು ಪ್ರಧಾನಿಯವರು ಒತ್ತಿ ಹೇಳಿದರು. ಭಾರತ ಯಾವಾಗಲೂ ಮಾನವೀಯತೆಗೆ ಮೊದಲ ಆದ್ಯತೆ ಎಂಬ ವಿಧಾನವನ್ನು ಅನುಸರಿಸಿದೆ. ಅಂತಾರಾಷ್ಟ್ರೀಯ ಸೌರ ಒಕ್ಕೂಟ, ವಿಪತ್ತು ಸ್ಥಿತಿಸ್ಥಾಪಕ ಮೂಲಸೌಕರ್ಯಕ್ಕಾಗಿ ಒಕ್ಕೂಟ, ಜಾಗತಿಕ ಜೈವಿಕ ಇಂಧನ ಒಕ್ಕೂಟ, ಮಿಷನ್ ಲೈಫ್ ಮತ್ತು ಏಕ್ ಪೆಡ್ ಮಾ ಕೆ ನಾಮ್ ಅಭಿಯಾನದಂತಹ ಭಾರತ ನೇತೃತ್ವದ ಉಪಕ್ರಮಗಳಲ್ಲಿ ಇದು ಪ್ರತಿಫಲಿಸುತ್ತದೆ ಎಂದು ಅವರು ಹೇಳಿದರು. ಅಂತಾರಾಷ್ಟ್ರೀಯ ಪಾಲುದಾರಿಕೆಯ ಭಾರತದ ದೃಷ್ಟಿಕೋನವು 'ವಸುಧೈವ ಕುಟುಂಬಕಂ' - ಎಂಬ ಕಾಲಾತೀತ ತತ್ವಶಾಸ್ತ್ರದಲ್ಲಿ ಬೇರೂರಿದೆ. ಈ ಅಂತರ್ಗತ ವಿಧಾನವು ವಿಶ್ವದ ವಿವಿಧ ಭಾಗಗಳಲ್ಲಿ ನೈಸರ್ಗಿಕ ವಿಕೋಪಗಳು ಸಂಭವಿಸಿದಾಗ - ಅದು ಶ್ರೀಲಂಕಾದಲ್ಲಿ ಚಂಡಮಾರುತ, ಅಫ್ಘಾನಿಸ್ತಾನದಲ್ಲಿ ಭೂಕಂಪ, ಮೊಜಾಂಬಿಕ್‌ನಲ್ಲಿ ಪ್ರವಾಹ ಅಥವಾ ಜಮೈಕಾದಲ್ಲಿ ಚಂಡಮಾರುತದ ಸಂದರ್ಭದಲ್ಲಿ ಭಾರತವನ್ನು ಮೊದಲ ಪ್ರತಿಕ್ರಿಯೆ ನೀಡುವ ರಾಷ್ಟ್ರವನ್ನಾಗಿ ಮಾಡಿದೆ ಎಂದರು. ಭಾರತದ "ಸರ್ವ ಜನ ಹಿತಯೇ, ಸರ್ವ ಜನ ಸುಖಯೇ" ಎಂಬ ಮಂತ್ರವು

ಆರ್ಥಿಕ ಸೇರ್ಪಡೆ, ಆರೋಗ್ಯ ಭದ್ರತೆ, ಡಿಜಿಟಲ್ ಗುರುತು, ತಂತ್ರಜ್ಞಾನ ಆಧಾರಿತ ಜನರ ಸಬಲೀಕರಣ ಮತ್ತು ಮಹಿಳೆಯರ ನೇತೃತ್ವದ ಅಭಿವೃದ್ಧಿಯನ್ನು ಬೆಳೆಸುವಲ್ಲಿ ಗಮನಾರ್ಹ ಫಲಿತಾಂಶಗಳಿಗೆ ಕಾರಣವಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

<>><><*><><<>

ಫ್ರಾನ್ಸ್‌ನ ಎವಿಯನ್‌ನಲ್ಲಿ ನಡೆದ ಜಿ-೭ ಶೃಂಗಸಭೆಯ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಕೆನಡಾ, ಬ್ರಿಟನ್ ಮತ್ತು ಯುಎಇ ನಾಯಕರೊಂದಿಗೆ ದ್ವಿಪಕ್ಷೀಯ ಸಭೆಗಳನ್ನು ನಡೆಸಿದರು. ಅಲ್ಲದೇ ಅವರು ಹಲವಾರು ಇತರ ದೇಶಗಳ ನಾಯಕರನ್ನು ಭೇಟಿಯಾಗಿ ಸಂವಾದ ನಡೆಸಿದರು. ಭಾರತ-ಕೆನಡಾ ನಡುವೆ ಭವಿಷ್ಯದ ಕಾರ್ಯತಂತ್ರದ ಪಾಲುದಾರಿಕೆಯನ್ನು ನಿರ್ಮಿಸುವ ತಮ್ಮ ಬದ್ಧತೆಯನ್ನು ಪ್ರಧಾನಿ ನರೇಂದ್ರ ಮೋದಿ ಮತ್ತು ಕೆನಡಾ ಪ್ರಧಾನಿ ಮಾರ್ಕ್ ಕಾರ್ನಿ ಪುನರುಚ್ಚರಿಸಿದರು. ಎಲ್‌ಎನ್‌ಜಿ, ಎಲ್‌ಪಿಜಿ ಮತ್ತು ಕಲ್ಲಿದ್ದಲಿಗೆ ಸಂಬಂಧಿಸಿದ ವಾಣಿಜ್ಯ ವ್ಯವಸ್ಥೆ ಸೇರಿದಂತೆ ಆರ್ಥಿಕ ಸಹಕಾರದಲ್ಲಿನ ಪ್ರಗತಿಯನ್ನು ಇಬ್ಬರು ನಾಯಕರು ಪರಿಶೀಲಿಸಿದರು. ವಿಜ್ಞಾನ ಮತ್ತು ತಂತ್ರಜ್ಞಾನ, ರಕ್ಷಣೆ, ಹಣಕಾಸು ಮತ್ತು ವಲಸೆಯಲ್ಲಿ ಪರಸ್ಪರ ಬೆಳೆಯುತ್ತಿರುವ ಸಹಕಾರವನ್ನು ಉಭಯ ನಾಯಕರು ಸ್ವಾಗತಿಸಿದರು. ಬ್ರಿಟನ್ ಪ್ರಧಾನಿ ಕೀರ್ ಸ್ಟಾರ್ಮರ್ ಅವರೊಂದಿಗಿನ ಭೇಟಿಯ ಸಂದರ್ಭದಲ್ಲಿ, ಪ್ರಧಾನಿ ನರೇಂದ್ರ ಮೋದಿ ಅವರು ವಿಷನ್ ೨೦೩೫ ರ ಅಡಿಯಲ್ಲಿ ಭಾರತ-ಬ್ರಿಟನ್ ಸಂಬಂಧಗಳಲ್ಲಿನ ಪ್ರಗತಿಯನ್ನು ಪರಿಶೀಲಿಸಿದರು. ವ್ಯಾಪಾರ, ರಕ್ಷಣೆ, ತಂತ್ರಜ್ಞಾನ, ಶಿಕ್ಷಣ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಪರಸ್ಪರ ಸಹಕಾರವನ್ನು ಉಭಯ ನಾಯಕರು ಸ್ವಾಗತಿಸಿದರು. ಬೆಂಗಳೂರಿನ ಲಿವರ್‌ಪೂಲ್ ವಿಶ್ವವಿದ್ಯಾಲಯ ಮತ್ತು ಮುಂಬೈನ ಯಾರ್ಕ್ ಹಾಗೂ ಬ್ರಿಸ್ಟಲ್ ವಿಶ್ವವಿದ್ಯಾಲಯಗಳು ಸೇರಿದಂತೆ ಭಾರತದಲ್ಲಿ ಬ್ರಿಟನ್ ವಿಶ್ವವಿದ್ಯಾಲಯಗಳ ಕ್ಯಾಂಪಸ್‌ಗಳನ್ನು ಸ್ಥಾಪಿಸುವಲ್ಲಿನ ಇತ್ತೀಚಿನ ಪ್ರಗತಿಯನ್ನು ಪರಿಶೀಲಿಸಿದರು. ಜಿ-೭ ಶೃಂಗಸಭೆಯ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಯುಎಇ ಅಧ್ಯಕ್ಷ ಶೇಖ್ ಮೊಹಮ್ಮದ್ ಬಿನ್ ಜಾಯೆದ್ ಅಲ್ ನಹ್ಯಾನ್ ಅವರನ್ನು ಭೇಟಿಯಾದರು. ಸಭೆಯಲ್ಲಿ, ಪ್ರಧಾನಿ ಮೋದಿ ಅವರು ಪಶ್ಚಿಮ ಏಷ್ಯಾ ಪ್ರದೇಶದಲ್ಲಿ ಶಾಶ್ವತ ಶಾಂತಿ, ಭದ್ರತೆ ಮತ್ತು ಸ್ಥಿರತೆಯನ್ನು ಮುನ್ನಡೆಸುವಲ್ಲಿ ಸಂವಾದ, ರಾಜತಾಂತ್ರಿಕತೆ ಮತ್ತು ಅಂತಾರಾಷ್ಟ್ರೀಯ ಕಾನೂನು, ಸಾರ್ವಭೌಮತ್ವ ಮತ್ತು ಪ್ರಾದೇಶಿಕ ಸಮಗ್ರತೆಗೆ ಗೌರವ ನೀಡುವ ಅಗತ್ಯವನ್ನು ಒತ್ತಿ ಹೇಳಿದರು. ಹಾರ್ಮುಜ್ ಜಲಸಂಧಿಯ ಮೂಲಕ ಮುಕ್ತ, ಸುರಕ್ಷಿತ ಮತ್ತು ಅಡೆತಡೆಯಿಲ್ಲದ ಸಂಚಾರ, ವ್ಯಾಪಾರ ಮತ್ತು ವಾಣಿಜ್ಯವನ್ನು ಮುಂದುವರಿಸಲು ಉಭಯ ನಾಯಕರು ಕರೆ ನೀಡಿದರು. ಇದೇ ವೇಳೆ ಪ್ರಧಾನ ನರೇಂದ್ರ ಮೋದಿ ಅವರು, ಕೀನ್ಯಾ ಅಧ್ಯಕ್ಷ ವಿಲಿಯಂ ರುಟೊ, ಈಜಿಪ್ಟ್ ಅಧ್ಯಕ್ಷ

ಅಬ್ದೆಲ್ ಫತ್ತಾಹ್, ಜಪಾನ್ ಪ್ರಧಾನಿ ಸನೇ ತಕೈಚಿ ಅವರನ್ನು ಭೇಟಿಯಾಗಿ ಪರಸ್ಪರ ಸಹಕಾರ ಹಾಗೂ ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಕುರಿತು ಚರ್ಚೆ ನಡೆಸಿದರು.

<>><><*><><<>

ಫ್ರಾನ್ಸ್‌ನಲ್ಲಿ ನಡೆಯುತ್ತಿರುವ ಜಿ-೭ ಶೃಂಗಸಭೆಯ ಸಂದರ್ಭದಲ್ಲಿ ಇಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರೊಂದಿಗೆ ಮಾತುಕತೆ ನಡೆಸಲಿದ್ದಾರೆ. ಆರ್ಥಿಕ ಬೆಳವಣಿಗೆ, ಜಾಗತಿಕ ಸರಬರಾಜು ಸರಪಳಿ, ಕೃತಕ ಬುದ್ಧಿಮತ್ತೆ, ಹೂಡಿಕೆ ಸಹಭಾಗಿತ್ವ ಹಾಗೂ ವಿವಿಧ ಜಾಗತಿಕ ಭದ್ರತಾ ಸವಾಲುಗಳ ಕುರಿತು ಉಭಯ ನಾಯಕರು ಚರ್ಚಿಸುವ ಸಾಧ್ಯತೆ ಇದೆ.

<>><><*><><<>

ಕೇಂದ್ರ ಗೃಹ ಸಚಿವ ಅಮಿತ್ ಶಾ ಅಧ್ಯಕ್ಷತೆಯಲ್ಲಿ ನಿನ್ನೆ ನವದೆಹಲಿಯಲ್ಲಿ ನಡೆದ ನಿರ್ಣಾಯಕ ಸಭೆಯ ಅಧ್ಯಕ್ಷತೆ ವಹಿಸಲಾಗಿದ್ದು, ಯಮುನಾ ನದಿಯ ಪುನರುಜ್ಜೀವನಕ್ಕಾಗಿ ದೀರ್ಘಕಾಲದಿಂದ ಬಾಕಿ ಇರುವ ಕಿಶೌ ಬಹುಪಯೋಗಿ ಅಣೆಕಟ್ಟು ಯೋಜನೆಯ ಕುರಿತು ಆರು ರಾಜ್ಯಗಳ ನಡುವೆ ಒಮ್ಮತ ಮೂಡಿಬಂದಿದೆ. ಈ ಯೋಜನೆಯ ಅನುಷ್ಠಾನಕ್ಕಾಗಿ ಹಿಮಾಚಲ ಪ್ರದೇಶ, ಉತ್ತರಾಖಂಡ, ದೆಹಲಿ, ಉತ್ತರ ಪ್ರದೇಶ, ಹರಿಯಾಣ ಮತ್ತು ರಾಜಸ್ಥಾನಗಳು ತಿಳುವಳಿಕೆ ಪತ್ರಕ್ಕೆ ಸಹಿ ಹಾಕಲು ಒಪ್ಪಿಕೊಂಡಿವೆ ಎಂದು ಕೇಂದ್ರ ಗೃಹ ಸಚಿವಾಲಯ ತಿಳಿಸಿದೆ. ಒಪ್ಪಂದಕ್ಕೆ ಸಹಿ ಹಾಕಿದ ನಂತರ, ಕಿಶೌ ಯೋಜನೆಯನ್ನು ಕೇಂದ್ರ ಸಚಿವ ಸಂಪುಟದ ಮುಂದೆ ಅನುಮೋದನೆಗಾಗಿ ಇಡಲಾಗುವುದು. ಒಪ್ಪಂದಿತ ಹಣಕಾಸಿನ ಮಾದರಿಯಡಿಯಲ್ಲಿ, ಕೇಂದ್ರ ಸರ್ಕಾರವು ಯೋಜನೆಯ ನೀರಿನ ಘಟಕಕ್ಕೆ ಶೇಕಡ ೯೦ ರಷ್ಟು ಸಹಾಯ ನೀಡುತ್ತದೆ. ಉಳಿದ ಶೇಕಡ ೧೦ ರಷ್ಟು ಹಣವನ್ನು ಆರು ರಾಜ್ಯಗಳು ಹಂಚಿಕೊಳ್ಳುತ್ತವೆ. ವಿದ್ಯುತ್ ಘಟಕದ ವೆಚ್ಚವನ್ನು ಹಂಚಿಕೊಳ್ಳುವ ಬದಲು, ಹಿಮಾಚಲ ಪ್ರದೇಶಕ್ಕೆ ಹಂಚಿಕೆಯಾದ ನೀರನ್ನು ದೆಹಲಿ ಮತ್ತು ರಾಜಸ್ಥಾನಕ್ಕೆ ಸರಬರಾಜು ಮಾಡಲು ಸಹ ನಿರ್ಧರಿಸಲಾಯಿತು. ಈ ನಿರ್ಧಾರ, ಶುದ್ಧ ಮತ್ತು ಶುದ್ಧ ಯಮುನಾ ನದಿಯತ್ತ ಮಹತ್ವದ ಹೆಜ್ಜೆಯಾಗಿದೆ.  ಇದು ನದಿಯಲ್ಲಿ ಶುದ್ಧ ನೀರಿನ ಹರಿವನ್ನು ಹೆಚ್ಚಿಸುತ್ತದೆ ಎಂದು ಸಚಿವಾಲಯ ಹೇಳಿದೆ.

<>><><*><><<>

ಫ್ರಾನ್ಸ್ ನ ನ್ಯೂಜೆರ್ಸಿ ಕ್ರೀಡಾಂಗಣದಲ್ಲಿ ನಿನ್ನೆ ರಾತ್ರಿ ನಡೆದ ಫಿಫಾ ವಿಶ್ವಕಪ್ ಪುಟ್ಬಾಲ್ ೨೦೨೬ ರ 'ಐ' ಗುಂಪಿನ ಪಂದ್ಯದಲ್ಲಿ ಫ್ರಾನ್ಸ್ ತಂಡ, ಸೆನೆಗಲ್ ತಂಡವನ್ನು ೩-೧ ಗೋಲುಗಳಿಂದ

ಸೋಲಿಸಿತು.  ಇದಕ್ಕೂ ಮೊದಲು, ಲಾಸ್ ಏಂಜಲೀಸ್‌ನ ಸೋಫಿ ಕ್ರೀಡಾಂಗಣದಲ್ಲಿ ನಡೆದ ಪಂದ್ಯದಲ್ಲಿ ಇರಾನ್ ಮತ್ತು ನ್ಯೂಜಿಲೆಂಡ್ ೨-೨ ಗೋಲುಗಳ ಡ್ರಾ ಸಾಧಿಸಿತು. ಮತ್ತೊಂದು ಪಂದ್ಯದಲ್ಲಿ, ಉರುಗ್ವೆ ಮತ್ತು ಸೌದಿ ಅರೇಬಿಯಾ, ಮಿಯಾಮಿಯಲ್ಲಿ ನಡೆದ ತಮ್ಮ ಮೊದಲ ಪಂದ್ಯದಲ್ಲಿ ೧-೧ ಗೋಲುಗಳ ಡ್ರಾ ಸಾಧಿಸಿತು. ಸಿಯಾಟಲ್ ಕ್ರೀಡಾಂಗಣದಲ್ಲಿ ನಡೆದ ತಮ್ಮ 'ಜಿ' ಗುಂಪಿನ ಆರಂಭಿಕ ಪಂದ್ಯದಲ್ಲಿ ಬೆಲ್ಜಿಯಂ ಮತ್ತು ಈಜಿಪ್ಟ್ ಕೂಡ ೧-೧ ಡ್ರಾ ದೊಂದಿಗೆ ಅಂಕಗಳನ್ನು ಹಂಚಿಕೊಂಡವು.

<>><><*><><<>

ಭಾರತ ಪುರುಷರ ಕ್ರಿಕೆಟ್ ತಂಡ ಇಂದು ಲಕ್ನೋದ ಅಟಲ್ ಬಿಹಾರಿ ವಾಜಪೇಯಿ ಏಕಾನಾ ಕ್ರಿಕೆಟ್ ಕ್ರೀಡಾಂಗಣದಲ್ಲಿ ಮೂರು ಪಂದ್ಯಗಳ ಸರಣಿಯ ಎರಡನೇ ಏಕದಿನ ಪಂದ್ಯದಲ್ಲಿ ಅಫ್ಘಾನಿಸ್ತಾನವನ್ನು ಎದುರಿಸಲಿದೆ. ಪಂದ್ಯ ಮಧ್ಯಾಹ್ನ ೧:೩೦ ಕ್ಕೆ ಆರಂಭವಾಗಲಿದೆ.  ಶುಭಮನ್ ಗಿಲ್ ನೇತೃತ್ವದ ಭಾರತ ತಂಡ ಪ್ರಸ್ತುತ ಸರಣಿಯಲ್ಲಿ ೧-೦ ಮುನ್ನಡೆಯಲ್ಲಿದೆ ಮತ್ತು ಇಂದಿನ ಪಂದ್ಯದಲ್ಲಿ ಸರಣಿಯನ್ನು ವಶಪಡಿಸಿಕೊಳ್ಳುವ ಗುರಿಯನ್ನು ಹೊಂದಿದೆ.

<>><><*><><<>

ಲೀಡ್ಸ್‌ನ ಹೆಡಿಂಗ್ಲಿಯಲ್ಲಿ ಐಸಿಸಿ ಮಹಿಳಾ ಟಿ-೨೦ ವಿಶ್ವಕಪ್‌ನ ಎರಡನೇ 'ಎ' ಗುಂಪಿನ ಪಂದ್ಯದಲ್ಲಿ ಭಾರತದ ಮಹಿಳಾ ಕ್ರಿಕೆಟ್ ತಂಡ, ಇಂದು ನೆದರ್‌ಲ್ಯಾಂಡ್ಸ್ ವಿರುದ್ಧ ಸೆಣಸಲಿದೆ. ಈ ಪಂದ್ಯ ಭಾರತೀಯ ಕಾಲಮಾನ ಸಂಜೆ ೭ ಗಂಟೆಗೆ ಆರಂಭವಾಗಲಿದೆ. ಹರ್ಮನ್‌ಪ್ರೀತ್ ಕೌರ್ ನೇತೃತ್ವದ ಭಾರತ ತಂಡ ಭಾನುವಾರ ಬರ್ಮಿಂಗ್‌ಹ್ಯಾಮ್‌ನಲ್ಲಿ ನಡೆದ ತಮ್ಮ ಮೊದಲ ಪಂದ್ಯದಲ್ಲಿ ಪಾಕಿಸ್ತಾನವನ್ನು ೬೪ ರನ್‌ಗಳಿಂದ ಸೋಲಿಸಿದ ನಂತರ ಗೆಲುವಿನ ಓಟವನ್ನು ಮುಂದುವರಿಸಲು ಎದುರು ನೋಡುತ್ತಿದೆ.

<>><><*><><<>

ಆಕ್ಲೆಂಡ್‌ನ ನಾರ್ತ್ ಹಾರ್ಬರ್ ರಾಷ್ಟ್ರೀಯ ಹಾಕಿ ಕೇಂದ್ರದಲ್ಲಿ ನಿನ್ನೆ ನಡೆದ ೨೦೨೬ ರ ಎಫ್‌ಐಎಚ್ ಹಾಕಿ ಮಹಿಳಾ ನೇಷನ್ಸ್ ಕಪ್‌ನ ಎರಡನೇ ಪೂಲ್ ಎ ಪಂದ್ಯದಲ್ಲಿ  ಭಾರತ ತಂಡ, ಜಪಾನ್ ತಂಡವನ್ನು ೨-೧ ಗೋಲುಗಳಿಂದ ಸೋಲಿಸಿತು.  ಈ ಗೆಲುವಿನೊಂದಿಗೆ, ಭಾರತ ತಂಡ ಎರಡೂ ಪೂಲ್ ಪಂದ್ಯಗಳನ್ನು ಗೆದ್ದು, ಸೆಮಿಫೈನಲ್‌ಗೆ ಸ್ಥಾನ ಪಡೆದುಕೊಂಡಿತು.  ಭಾರತ ನಾಳೆ ಬೆಳಗ್ಗೆ ೪:೧೫ ಕ್ಕೆ ನಡೆಯುವ ಪಂದ್ಯಾವಳಿಯ ಕೊನೆಯ ಪೂಲ್ ಎ ಪಂದ್ಯದಲ್ಲಿ ಉರುಗ್ವೆಯನ್ನು ಎದುರಿಸಲಿದೆ.

<>><><*><><<>

ಕೇಂದ್ರ ಯುವ ವ್ಯವಹಾರ ಮತ್ತು ಕ್ರೀಡಾ ಸಚಿವ ಡಾ. ಮನ್ಸುಖ್ ಮಾಂಡವಿಯಾ ಇಂದು ಮುಂಬೈನ ವರ್ಲಿ ಸೈಕಲ್ ಟ್ರ್ಯಾಕ್‌ನಲ್ಲಿ ವಿಶೇಷ ಫಿಟ್ ಇಂಡಿಯಾ ಸೈಕ್ಲೋಥಾನ್‌ಗೆ ನೇತೃತ್ವ ವಹಿಸಲಿದ್ದಾರೆ. ಫಿಟ್ ಇಂಡಿಯಾ ಸೈಕ್ಲೋಥಾನ್- ಸಮುದಾಯದ ಭಾಗವಹಿಸುವಿಕೆ, ಸೈಕ್ಲಿಂಗ್, ಯೋಗ ಹಾಗೂ ಇತರ ದೈಹಿಕ ಚಟುವಟಿಕೆಗಳ ಮೂಲಕ ಆರೋಗ್ಯಕರ ಜೀವನಶೈಲಿಯನ್ನು ಉತ್ತೇಜಿಸುತ್ತಿರುವ ಫಿಟ್ ಇಂಡಿಯಾ ಚಳವಳಿಯ ಭಾಗವಾಗಿದೆ ಎಂದು ಕೇಂದ್ರ ಯುವ ವ್ಯವಹಾರಗಳು ಮತ್ತು ಕ್ರೀಡಾ ಸಚಿವಾಲಯ ತಿಳಿಸಿದೆ. ಇದೇ ೨೧ ರಂದು ಆಚರಿಸಲಾಗುವ ೧೨ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯ ಜಾಗತಿಕ ಕಾರ್ಯಕ್ರಮಗಳಿಗೆ ಇದು ಮುನ್ನುಡಿಯಾಗಿಯೂ ಕಾರ್ಯನಿರ್ವಹಿಸಲಿದೆ ಎಂದು ಸಚಿವಾಲಯ ತಿಳಿಸಿದೆ.

<>><><*><><<>

ಮಧ್ಯಪ್ರಾಚ್ಯ-ಭಾರತ ಆಳಸಮುದ್ರ ಪೈಪ್‌ಲೈನ್ ಯೋಜನೆಗೆ ಸಂಬಂಧಿಸಿದಂತೆ ಯಾವುದೇ ಪ್ರಸ್ತಾವನೆ ಪ್ರಸ್ತುತ ಸಚಿವಾಲಯದ ಪರಿಗಣನೆಯಲ್ಲಿಲ್ಲ ಎಂದು ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯ ಸ್ಪಷ್ಟಪಡಿಸಿದೆ. ಈ ಕುರಿತು ಪ್ರಕಟಣೆ ಹೊರಡಿಸಿರುವ ಸಚಿವಾಲಯ, ಗುಜರಾತ್ ಅನ್ನು ಒಮನ್ ಹಾಗೂ ಇತರ ಗಲ್ಫ್ ರಾಷ್ಟ್ರಗಳೊಂದಿಗೆ ಸಂಪರ್ಕಿಸುವ ‘ಮಧ್ಯಪ್ರಾಚ್ಯ-ಭಾರತ ಆಳಸಮುದ್ರ ಪೈಪ್‌ಲೈನ್’ ಯೋಜನೆಯನ್ನು ಕೇಂದ್ರ ಸರ್ಕಾರ ಸಕ್ರಿಯವಾಗಿ ಮುಂದುವರಿಸುತ್ತಿದೆ ಎಂಬರ್ಥದ ಹಲವು ಮಾಧ್ಯಮ ವರದಿಗಳು ಪ್ರಕಟವಾಗಿರುವುದು ಸತ್ಯಕ್ಕೆ ದೂರವಾಗಿದೆ ಎಂದು ಹೇಳಿದೆ. ಆದರೆ, ಈ ಯೋಜನೆಗೆ ಸಂಬಂಧಿಸಿದಂತೆ ಸಚಿವಾಲಯದ ಯಾವುದೇ ಹಂತದಲ್ಲಿಯೂ ಒಮನ್ ಅಥವಾ ಇತರ ಯಾವುದೇ ಗಲ್ಫ್ ರಾಷ್ಟ್ರಗಳೊಂದಿಗೆ ಸಕ್ರಿಯ ಚರ್ಚೆಗಳು ಅಥವಾ ಮಾತುಕತೆಗಳು ನಡೆಯುತ್ತಿಲ್ಲ ಎಂದು ಸಚಿವಾಲಯ ಸ್ಪಷ್ಟಪಡಿಸಿದೆ.

<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>

<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ ><><<>